




ಕೊಂಕಣಿ ಅಧ್ಯಯನ ಪೀಠದ ವತಿಯಿಂದ ಭಾರತೀಯ ಭಾಷಾ ಏಕತಾ ದಿವಸ ಕಾರ್ಯಕ್ರಮ ವಿಶ್ವವಿದ್ಯಾನಿಲಯ ಕಾಲೇಜಿನಲ್ಲಿ ಭಾಷಾ ಸಂಘಗಳ ಸಹಯೋಗದಲ್ಲಿ ದಿನಾಂಕ 11-12-2023 ರಂದು ಏರ್ಪಡಿಸಲಾಗಿತ್ತು. ವಿಶೇಷ ಉಪನ್ಯಾಸಕರಾಗಿ ವಿಶ್ರಾಂತ ಪ್ರಾಧ್ಯಾಪಕಿ ಹಾಗೂ ಖ್ಯಾತ ಚಿಂತಕಿ ಡಾ ಮೀನಾಕ್ಷಿ ರಾಮಚಂದ್ರ ಭಾಗಿಯಾಗಿದರು.






ಕೊಂಕಣಿ ಅಧ್ಯಯನ ಪೀಠದ ವತಿಯಿಂದ ಭಾರತೀಯ ಭಾಷಾ ಏಕತಾ ದಿವಸ ಕಾರ್ಯಕ್ರಮ ವಿಶ್ವವಿದ್ಯಾನಿಲಯ ಸಂಧ್ಯಾ ಕಾಲೇಜಿನಲ್ಲಿ ಬ್ಯಾರಿ ಪೀಠ ಹಾಗೂ ತುಳು ಪೀಠದ ಸಹಯೋಗದಲ್ಲಿ ದಿನಾಂಕ 11-12-2023 ರಂದು ಏರ್ಪಡಿಸಲಾಗಿತ್ತು. ವಿಶೇಷ ಉಪನ್ಯಾಸಕರಾಗಿ ವಿಶ್ರಾಂತ ಪ್ರಾಂಶುಪಾಲರು ಹಾಗೂ ಖ್ಯಾತ ಚಿಂತಕರಾದ ಡಾ ಇಸ್ಮಾಯಿಲ್ ಎನ್ ಭಾಗಿಯಾಗಿದರು.






ಸಂಶೋಧನಾ ವಿಧಾನ ಕಾರ್ಯಾಗಾರ ವಿಶ್ವವಿದ್ಯಾನಿಲಯ ಕಾಲೇಜಿನಲ್ಲಿ ಅರ್ಥಶಾಸ್ತ್ರ, ಹಿಂದಿ ಮತ್ತು ಇತಿಹಾಸ ಮತ್ತು ಪುರಾತತ್ವ ಸ್ನಾತಕೋತ್ತರ ವಿಭಾಗದ ಆಶ್ರಯದಲ್ಲಿ ಸಹಯೋಗದಲ್ಲಿ ದಿನಾಂಕ ೧೨-೧೨-೨೦೨೩ ಏರ್ಪಡಿಸಲಾಗಿತ್ತು. ಸಂಪನ್ಮೂಲ ವ್ಯಕ್ತಿಗಳಾಗಿ ನಿಟ್ಟೆ ವಿಶ್ವವಿದ್ಯಾನಿಲಯದ ಉಷಾ ಇನ್ಸಸ್ಟಿಟ್ಯೂಟ್ ಆಫ್ ನರ್ಸಿಂಗ್ ಸೈನ್ಸ್ ನ ಸಮುದಾಯ ಆರೋಗ್ಯ ವಿಭಾಗದ ಮುಖ್ಯಸ್ಥರಾದ ಡಾ ನೀತಾ ಕಾಮತ್, ಸ್ನಾತಕೋತ್ತರ ವಾಣಿಜ್ಯ ವಿಭಾಗದ ಸಂಯೋಜಕರಾದ ಡಾ. ಅಬ್ಬೋಕರ್ ಸಿದ್ದಿಕ್ ಹಾಗೂ ಶ್ರೀನಿವಾಸ ವಿಶ್ವವಿದ್ಯಾನಿಲಯ ಮಂಗಳೂರಿನ ಸಂಶೋಧನಾ ಪ್ರಾಧ್ಯಾಪಕರಾದ ಡಾ ದೇವದಾಸ ಪೈ ಭಾಗಿಯಾಗಿದರು. ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಭಾರ ಪ್ರಾಂಶುಪಾಲರಾದ ಡಾ ಲತಾ ಎ ಪಂಡಿತ್ ವಹಿಸಿದ್ದರು.







ಕೊಂಕಣಿ ಅಧ್ಯಯನ ಪೀಠ ಹಾಗೂ ಪೊಂಪೈ ಕಾಲೇಜಿನ ಸಹಯೋಗದಲ್ಲಿ ಪೊಂಪೈ ಕಾಲೇಜಿನಲ್ಲಿ ದಿನಾಂಕ 23-11-2023 ರಂದು ಆಮಂತ್ರಿತ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಶ್ರೀನಿವಾಸ ವಿಶ್ವವಿದ್ಯಾನಿಲಯ ಮಂಗಳೂರಿನ ಸಂಶೋಧನಾ ಪ್ರಾಧ್ಯಾಪಕರಾದ ಡಾ ದೇವದಾಸ ಪೈ ಹಾಗೂ ಸಂತ ಅಲೋಶಿಯಸ್ ಕಾಲೇಜಿನ ಕೊಂಕಣಿ ವಿಭಾಗದ ಮುಖ್ಯಸ್ಥರಾದ ಶ್ರೀಮತಿ ಫ್ಲೋರಾ ಕ್ಯಾಸ್ತೆಲಿನೋ ಭಾಗಿಯಾಗಿದರು. ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲರಾದ ಡಾ ಪುರುಷೋತ್ತಮ ಕೆ.ವಿ ವಹಿಸಿದ್ದರು.




.

ದಿನಾಂಕ 24-11-2023 ರಂದು ಕೊಂಕಣಿ ಅಧ್ಯಯನ ಪೀಠ ಮಂಗಳೂರು ಇವರಿಂದ ಸರಕಾರಿ ಪ್ರಥಮ ರ್ದ್ಜೆ ಕಾಲೇಜು ಹೆಬ್ರಿ ಇಲ್ಲಿ Translation Challenges and Principles ಎಂಬ ಭಾಷಾಂತರ ಕಾರ್ಯಾಗಾರ ನಡೆಯಿತು. ಸಂಪನ್ಮೂಲ ವ್ಯಕ್ತಿಗಳಾದ ಡಾ ದೇವದಾಸ ಪೈ ಅವರು ಭಾಷಾಂತರದ ನಿಯಮಗಳು ಹಾಗೂ ಸಾಧ್ಯತೆಗಳ ಬಗ್ಗೆ ಮಾತನಾಡಿದರು. ಕಾಲೇಜಿನ ಪ್ರಾಂಶುಪಾಲರಾದ ಡಾ ವಿಷ್ಣುಮರ್ತಿ ಪ್ರಭು ಅವರು ತಮ್ಮ ಅದ್ಯಕ್ಷೀಯ ನುಡಿಯಲ್ಲಿ ಭಾಷಾಂತರದಲ್ಲಿ ನುಸುಳಬಹುದಾದ ದೋಷಗಳ ಬಗ್ಗೆ ಎಚ್ಚರಿಕೆ ವಹಿಸುವಂತೆ ಸಲಹೆ ನೀಡಿದರು. ಕರ್ಯಕ್ರಮದ ಉದ್ಘಾಟನೆಯನ್ನು ಕೊಂಕಣಿ ಅಧ್ಯಯನ ಪೀಠ ಇದರ ಸಂಚಾಲಕರಾದ ಡಾ. ಜಯವಂತ ನಾಯಕ್ ಮುನಿಯಾಲು ಅವರು ನೆರವೇರಿಸಿ ಕೊಂಕಣಿ ಭಾಷೆಯ ಬೆಳವಣಿಗೆಯಲ್ಲಿ ಭಾಷಾಂತರದ ಪಾತ್ರ ಮುಖ್ಯವಾದುದು ಎಂದರು




ದಿನಾಂಕ 21-03-2024 ರಂದು ಬೆಸೆಂಟ್ ಮಹಿಳಾ ಕಾಲೇಜು ಮಂಗಳೂರಿನಲ್ಲಿ ಕೊಂಕಣಿ ಅಧ್ಯಯನ ಪೀಠದ ಸಹಯೋಗದಲ್ಲಿ ಬಹುಭಾಷೀಯ ಏಕ ದಿನ ರಾಷ್ಟ್ರೀಯ ವಿಚಾರಸಂಕಿರಣ ನಡೆಯಿತು. ಮಂಗಳೂರು ವಿಶ್ವವಿದ್ಯಾನಿಲಯದ ವಾಣಿಜ್ಯಶಾಸ್ತ್ರ ನಿಕಾಯದ ಡೀನರಾದ ಪ್ರೊ.ಈಶ್ವರ್ ನಾಯ್ಕ್ ಅವರು ವಿಚಾರಸಂಕಿರಣದ ಅಧ್ಯಕ್ಷತೆ ವಹಿಸಿದ್ದರು. ಬೆಸೆಂಟ್ ಸಂಸ್ಥೆಯ ಅಧ್ಯಕ್ಷರಾದ ಮಣೇಲ್ ಅಣ್ಣಪ್ಪ ನಾಯಕ್ ಉಪಸ್ಥಿತರಿದ್ದರು.



ದಿನಾಂಕ 26-03-2024 ರಂದು ಮಿಲಾಗ್ರೆಸ್ ಕಾಲೇಜು ಮಂಗಳೂರಿನಲ್ಲಿ ಕೊಂಕಣಿ ಅಧ್ಯಯನ ಪೀಠದ ಸಹಯೋಗದಲ್ಲಿ ಏಕ ದಿನ ರಾಷ್ಟ್ರೀಯ ವಿಚಾರಸಂಕಿರಣ ನಡೆಯಿತು. ಮಂಗಳೂರು ವಿಶ್ವವಿದ್ಯಾನಿಲಯದ ಗೌರವಾನ್ವಿತ ಕುಲಪತಿಯವರಾದ ಪ್ರೊ. ಪಿ.ಎಲ್ ಧರ್ಮ ವಿಚಾರಸಂಕಿರಣದ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಫಾ. ಮೈಕೆಲ್ ಸಂತುಮೇಯರ್ ಸಮಾರಂಭದಲ್ಲಿ ಉಪಸ್ಥಿತರಿದ್ದರು.






ದಿನಾಂಕ 30-01-2024 ರಂದು ಸಂತ ಅಲೋಶಿಯಸ್ ಕಾಲೇಜು ಮಂಗಳೂರಿನಲ್ಲಿ ಕೊಂಕಣಿ ಅಧ್ಯಯನ ಪೀಠದ ಸಹಯೋಗದಲ್ಲಿ ಏಕ ದಿನ ರಾಷ್ಟ್ರೀಯ ವಿಚಾರಸಂಕಿರಣ ನಡೆಯಿತು. ಮಂಗಳೂರು ವಿಶ್ವವಿದ್ಯಾನಿಲಯದ ಗೌರವಾನ್ವಿತ ಪ್ರಭಾರ ಕುಲಪತಿಯವರಾದ ಪ್ರೊ. ಜಯರಾಜ್ ಅಮೀನ್ ವಿಚಾರಸಂಕಿರಣದ ಅಧ್ಯಕ್ಷತೆ ವಹಿಸಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಫಾ. ಪ್ರವೀಣ್ ಮಾರ್ಟಿಸ್ ಸಮಾರಂಭದಲ್ಲಿ ಉಪಸ್ಥಿತರಿದ್ದರು.

ಕೊಂಕಣಿ ಅಧ್ಯಯನ ಪೀಠ ಹಾಗೂ ಸೆಕ್ರೆಡ್ ಹಾರ್ಟ್ ಕಾಲೇಜು ಮಡಂತ್ಯಾರ್ ಸಹಯೋಗದಲ್ಲಿ ದಿನಾಂಕ 09-10-2023 ರಂದು ವಿಶೇಷ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿತ್ತು. ಕಾಲೇಜಿನ ಪ್ರಾಂಶುಪಾಲರಾದ ಅಲೆಕ್ಸ್ ಐವನ್ ಸಿಕ್ವೇರಾ ಹಾಗೂ ಶ್ರೀ ವೆಂಕಟೇಶ್ ನಾಯಕ್ ಸಂಪನ್ಮೂಲ ವ್ಯಕ್ತಿಯಾಗಿ ಭಾಗಿಯಾಗಿದ್ದರು.

ಕೊಂಕಣಿ ಅಧ್ಯಯನ ಪೀಠ ಹಾಗೂ ಪಿ.ಪಿ ಸಿ ಸಂಧ್ಯಾ ಕಾಲೇಜು ಉಡುಪಿ ಸಹಯೋಗದಲ್ಲಿ ದಿನಾಂಕ 19-11-2023 ರಂದು ಕೊಂಕಣಿ ಸರ್ಟಿಫಿಕೇಟ್ ಕೋರ್ಸ್ ಸಮಾರೋಪ ಸಮಾರಂಭ ಏರ್ಪಡಿಸಲಾಗಿತ್ತು. ಕಾಲೇಜಿನ ಪ್ರಾಂಶುಪಾಲರಾದ ಡಾ. ಸುಕನ್ಯ ಮೇರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.